# ದಾವಣಗೆರೆ ವಿಶ್ವವಿದ್ಯಾನಿಲಯ
# Davangere University

ಡಾ. ಶಿವಶಂಕರ. ಕೆ. ಎಂ.ಬಿ.ಎ., ಪಿಹೆಚ್.ಡಿ
ಕುಲಸಚಿವರ ಕಛೇರಿ (ಪರೀಕ್ಷಾಂಗ),
ದಾವಣಗೆರೆ ವಿಶ್ವವಿದ್ಯಾನಿಲಯ,
ಶಿವಗಂಗೋತ್ರಿ, ದಾವಣಗೆರೆ-577007.
ದೂರವಾಣಿ ಸಂಖ್ಯೆ: 08192-208420/208104.

Dr. Shivashankar. K., M.B.A., Ph.D.,
Office of the Registrar (Evaluation)
Davangere University,
Shivagangothri, Davangere -577007.
Phone No. 08192-208420/208104.

Email ID: examination@davangereuniversity.ac.in

ಸಂಖ್ಯೆ:ದಾವಿ:ಪವಿ:ಆಶಾ:2023-24; ದಿನಾಂಕ: 18-05-2023

## ಪರಿಷ್ಕೃತ ಪ್ರಕಟಣೆ

ವಿಷಯ: ಜುಲೈ/ಅಗಸ್ಟ್-2023ರಲ್ಲಿ ನಡೆಯುವ ಸ್ನಾತಕ CBCSನ ಬಿ.ಎ. / ಬಿ.ಎಸ್ಸಿ / ಬಿ.ಕಾಂ / ಬಿ.ಬಿ.ಎಂ / ಬಿ.ಸಿ.ಎ /ಬಿ.ಎಸ್.ಡಬ್ಲ್ಯೂ /ಬಿ.ಬಿ.ಎ. **1ರಿಂದ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ** (ರೆಗ್ಯುಲರ್ ಮತ್ತು ರಿಪೀಟರ್ಸ್) ಪರೀಕ್ಷಾ ಅರ್ಜಿ/ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15-05-2023.

*********

ವಿಶ್ವವಿದ್ಯಾನಿಲಯದಿಂದ ಜುಲೈ/ಅಗಸ್ಟ್-2023ರಲ್ಲಿ ನಡೆಸುವ ಸ್ನಾತಕ ಪ್ರಾಯೋಗಿಕ/ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕಗಳು ಈ ಕೆಳಗಿನಂತಿರುತ್ತವೆ. ಲಿಖಿತ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು ನಂತರ ಕಳುಹಿಸಲಾಗುವುದು. ಇದಕ್ಕೆ ಪೂರಕವಾದ ಇತರೆ ಮಾಹಿತಿಗಳನ್ನು ಕೆಳಗೆ ನೀಡಲಾಗಿದೆ ಹಾಗೂ ಪರೀಕ್ಷಾ ಶುಲ್ಕವನ್ನು ಡಿಜಿಟಲ್ ಮಾಧ್ಯಮದ ಮೂಲಕ ಸಂದಾಯ ಮಾಡುವುದು ಕಡ್ಡಾಯವಾಗಿದೆ.

| ಕ್ರ.ಸಂ | ವಿವರ | ದಿನಾಂಕ |
|---|---|---|
| 01 | ಪ್ರಾಯೋಗಿಕ ಪರೀಕ್ಷೆಗಳು (ಬಿ.ಎಸ್ಸಿ, ಬಿ.ಸಿ.ಎ) | 18-06-2023 ರಿಂದ 02-07-2023 |
| 02 | ಲಿಖಿತ ಪರೀಕ್ಷೆಗಳು | 03-07-2023 ರಿಂದ |

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವರು(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

## ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು

ದಂಡಶುಲ್ಕವಿಲ್ಲದೆ ------------------- 18-05-2023 ರಿಂದ 05-06-2023 ರವರೆಗೆ
ದಂಡಶುಲ್ಕ ರೂ.110 ರಂತೆ ಪ್ರತಿ ಸೆಮಿಸ್ಟರ್‌ಗೆ ------------------- 06-06-2023 ರಿಂದ 09-06-2023 ರವರೆಗೆ
ದಂಡಶುಲ್ಕ ರೂ.550 ರಂತೆ ಪ್ರತಿ ಸೆಮಿಸ್ಟರ್‌ಗೆ ------------------- 10-06-2023 ರಿಂದ 11-06-2023 ರವರೆಗೆ

## ಶುಲ್ಕದ ವಿವರಗಳು

1. ಬಿ.ಎ ವಿದ್ಯಾರ್ಥಿಗಳಿಗೆ

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 2 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 565.00<br>ಅಂಕಪಟ್ಟಿ ಶುಲ್ಕ ರೂ. 185.00<br>------<br>ಒಟ್ಟು ಶುಲ್ಕ ರೂ. = 750.00 |
| 3 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ<br>(ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆರೂ, 565.00 ಕ್ಕೆ ಒಳಪಟ್ಟು) | ರೂ. 170.00 |
| 4 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ(ಫೇಲ್ ವಿದ್ಯಾರ್ಥಿಗಳಿಗೆ) | ರೂ. 130.00 |
| 5 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ | ರೂ. 100.00 |

2. ಬಿ.ಎಸ್ಸಿ ವಿದ್ಯಾರ್ಥಿಗಳಿಗೆ

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 2 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 715.00<br>ಅಂಕಪಟ್ಟಿ ಶುಲ್ಕ ರೂ. 185.00<br>------<br>ಒಟ್ಟು ಶುಲ್ಕ ರೂ. = 900.00 |

| | | |
|---|---|---|
| 3 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ<br>(ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆರೂ, 715.00 ಕ್ಕೆ ಒಳಪಟ್ಟು) | ರೂ. 170.00 |
| 4 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ(ಫೇಲ್ ವಿದ್ಯಾರ್ಥಿಗಳಿಗೆ) | ರೂ. 130.00 |
| 5 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ | ರೂ. 100.00 |

3. **ಬಿ.ಕಾಂ ವಿದ್ಯಾರ್ಥಿಗಳಿಗೆ**

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 2 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 615.00<br>ಅಂಕಪಟ್ಟಿ ಶುಲ್ಕ ರೂ. 185.00<br>------<br>ಒಟ್ಟು ಶುಲ್ಕ ರೂ. = 800.00 |
| 3 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ<br>(ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆರೂ, 505.00 ಕ್ಕೆ ಒಳಪಟ್ಟು) | ರೂ. 155.00 |
| 4 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ | ರೂ. 100.00 |

4. **ಬಿ.ಬಿ.ಎಂ/ಬಿ.ಸಿ.ಎ/ಬಿ.ಎಸ್.ಡಬ್ಲ್ಯೂ/ಬಿ.ಬಿ.ಎ ವಿದ್ಯಾರ್ಥಿಗಳಿಗೆ**

| ಕ್ರ.ಸಂ | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಪ್ರಕ್ರಿಯೆ ಶುಲ್ಕ | ರೂ. 100.00 |
| 2 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ಪರೀಕ್ಷಾ ಶುಲ್ಕ ರೂ. 955.00<br>ಅಂಕಪಟ್ಟಿ ಶುಲ್ಕ ರೂ. 185.00<br>------<br>ಒಟ್ಟು ಶುಲ್ಕ ರೂ. 1,140.00 |
| 3 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ<br>(ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ ರೂ, 870.00 ಕ್ಕೆ ಒಳಪಟ್ಟು) | ರೂ. 200.00 |
| 4 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ (ಫೇಲ್ ವಿದ್ಯಾರ್ಥಿಗಳಿಗೆ) | ರೂ. 130.00 |
| 5 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಶುಲ್ಕ | ರೂ. 100.00 |

5. **ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯ**

| | | |
|---|---|---|
| 1 | ತಾತ್ಕಾಲಿಕ ಪದವಿ ಪ್ರಮಾಣ ಪತ್ರದ ಶುಲ್ಕ<br>(ಆಸಕ್ತವುಳ್ಳ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯ) | ರೂ. 424/- |
| 2 | ಘಟಿಕೋತ್ಸವ ಶುಲ್ಕದ<br>(6ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯ)<br>ಸಾಮಾನ್ಯ ಅಭ್ಯರ್ಥಿಗಳು<br>ಪ.ಜಾತಿ/ಪ ಪಂಗಡ/ ಪ್ರವರ್ಗ-1 | ರೂ. 880 .00<br>ರೂ. 715 .00 |

| | |
|---|---|
| **2016-17ನೇ ಪಠ್ಯಕ್ರಮದ ದ್ವಿಗುಣ ಅವಧಿ (Double the Duration)ಮುಗಿದ ವಿದ್ಯಾರ್ಥಿಗಳಿಗೆ ವಿಶೇಷ ಶುಲ್ಕ** | ಪ್ರಸ್ತುತ ಪ್ರಕಟಣೆಯಲ್ಲಿ ನಿಗದಿ ಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತಿ ಸೆಮಿಸ್ಟರ್‌ಗೆ ವಿಶೇಷ ಶುಲ್ಕ ರೂ:5,000/- ಗಳನ್ನು ನಿಗದಿಪಡಿಸಲಾಗಿದೆ. |

## ವಿದ್ಯಾರ್ಥಿಗಳಿಗೆ ಸೂಚನೆ:-

1. **ವಿದ್ಯಾರ್ಥಿಗಳು Online ಮುಖಾಂತರ ಅರ್ಜಿ ಸಲ್ಲಿಸಲು studentportal.universitysolutions.in ನಲ್ಲಿ login** ಆಗಿ **ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.**
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವುದಕ್ಕೆ ಮುಂಚಿತವಾಗಿ ಎಲ್ಲಾ ಮಾಹಿತಿಗಳ ನಿಖರತೆಯನ್ನು ಖಾತರಿಪಡಿಸಿಕೊಳ್ಳಬೇಕು.
3. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಪ್ರಥಮ ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳುವುದು.
4. ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ವಿಷಯಗಳ ಆಯ್ಕೆಯು ವಿದ್ಯಾರ್ಥಿಗೆ ಇರುವುದಿಲ್ಲ.
5. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಪರೀಕ್ಷೆ ಬರೆಯಬೇಕಾದ ವಿಷಯಗಳನ್ನು ಖಚಿತ ಪಡಿಸಿಕೊಳ್ಳುವುದು.
6. ವಿದ್ಯಾರ್ಥಿಗಳಿಗೆ ಪರೀಕ್ಷೆ ಶುಲ್ಕವನ್ನು ಪಾವತಿ ಮಾಡುವ ವಿಧಾನ.

- ವಿದ್ಯಾರ್ಥಿಯು Web Portal ಮುಖಾಂತರ Payment Gateway ಸೌಲಭ್ಯವನ್ನು ಬಳಸಿಕೊಂಡು (Debit Card / Credit Card / Net Banking / Wallet, ಇತ್ಯಾದಿ) ಹಣ ಪಾವತಿಸಬಹುದು. ಈ ವಿಧಾನದಲ್ಲಿ ಸೇವಾ ಶುಲ್ಕವಿರುತ್ತದೆ.

7. ವಿದ್ಯಾರ್ಥಿಗಳು ತಮ್ಮ Web Portal ನಿಂದ ಪರೀಕ್ಷಾ ಪ್ರವೇಶ ಪತ್ರಿಕೆಯನ್ನು ಸ್ವತಃ ಪಡೆಯಬಹುದು.
8. ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಶೈಕ್ಷಣಿಕ ಅವಧಿ ಮುಗಿಯುವರೆಗೂ ತರಗತಿಗಳಿಗೆ ಹಾಜರಾಗಿ ನಿಯಮಾನುಸಾರ ಹಾಜರಾತಿ ಗಳಿಸುವುದು ಕಡ್ಡಾಯವಾಗಿರುತ್ತದೆ. ಇಲ್ಲವಾದಲ್ಲಿ ಪರೀಕ್ಷೆ ಬರೆಯಲು ಅನರ್ಹರು.

**<u>ವಿಶೇಷ ಸೂಚನೆ:</u> ವಿದ್ಯಾರ್ಥಿಗಳು Internet Browsing centerನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾನಿಲಯಕ್ಕೆ ಹಣ ಪಾವತಿಸುವ ಸಂದರ್ಭದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು ಹಾಗೂ ಎರಡು ಬಾರಿ ಶುಲ್ಕ ಪಾವತಿಸಿದ್ದಲ್ಲಿ ಮಾರುಪಾವತಿಗೆ(No Refund) ಅವಕಾಶ ಇರುವುದಿಲ್ಲ.**

9. **ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು**

## <u>ಪ್ರಾಚಾರ್ಯರಿಗೆ ಸೂಚನೆ:-</u>

10. ಕಾಲೇಜಿನ ಪ್ರಾಂಶುಪಾಲರು ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಕಾರ್ಯಗಳನ್ನು Web Portal ಮುಖಾಂತರ ಮಾಡಬೇಕು.
11. ವಿಶ್ವವಿದ್ಯಾನಿಲಯವು ವಿದ್ಯಾರ್ಥಿಗಳಿಗೆ ನೊಂದಣಿ ಸಂಖ್ಯೆ (Register No.) ಹಾಗೂ ಗುರುತಿನ ಸಂಖ್ಯೆ (Student ID) ತಯಾರು ಮಾಡಿ ಕಾಲೇಜುಗಳಿಗೆ ಅಂತರ್ಜಾಲದ ಮುಖಾಂತರ ಕಳುಹಿಸುವುದು.
12. ಕಾಲೇಜಿನ ಪ್ರಾಂಶುಪಾಲರು ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಕಟ್ಟುವುದಕ್ಕಿಂತ ಮುಂಚಿತವಾಗಿ ಶೈಕ್ಷಣಿಕವಾಗಿ ಅರ್ಹತೆಗಳು ಹೊಂದಿದ್ದಾರೆ ಎಂದು ಖಚಿತ ಪಡಿಸಿಕೊಳ್ಳಬೇಕು.
13. ಕಾಲೇಜಿನ ಪ್ರಾಂಶುಪಾಲರು Web Portal ಮುಖಾಂತರ ವಿದ್ಯಾರ್ಥಿಗಳ ಪರೀಕ್ಷೆ ಅರ್ಹತೆಯನ್ನು ಹಾಗೂ ಶುಲ್ಕದ ರಿಯಾಯಿತಿಯನ್ನು ದೃಢೀಕರಿಸಬೇಕು.
14. ಕಾಲೇಜು ದೃಢೀಕರಿಸಿದ ಮಾಹಿತಿಗಳನ್ನು ವಿದ್ಯಾರ್ಥಿಗಳಿಗೆ Web Portal ಮುಖಾಂತರ ತಿಳಿಸಲಾಗುವುದು.
15. ಅವಶ್ಯವಿದ್ದ ಸಂದರ್ಭದಲ್ಲಿಮಾತ್ರ ವಿದ್ಯಾರ್ಥಿಗಳ ಪರೀಕ್ಷಾ ಪ್ರವೇಶ ಪತ್ರವನ್ನು ವಿಶ್ವವಿದ್ಯಾನಿಲಯದ ನಿರ್ದೇಶನುಸಾರ ಕಾಲೇಜುಗಳಲ್ಲಿ ಮುದ್ರಿಸಿ ಒದಗಿಸತಕ್ಕದ್ದು.
16. ವಿಶ್ವವಿದ್ಯಾನಿಲಯವು ಕಾಲೇಜುಗಳಿಗೆ ಒದಗಿಸುವ ಪ್ರಶ್ನೆ ಪತ್ರಿಕೆಗಳ ಸಂಖ್ಯೆಯನ್ನು Web Portal ಮುಖಾಂತರ ತಿಳಿಸುವುದು. ಕಾಲೇಜುಗಳು ಇದನ್ನು ಪರಿಶೀಲಿಸಿ ಯಾವುದಾದರು ವ್ಯತ್ಯಯವಿದ್ದರೆ ಅದನ್ನು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಗಮನಕ್ಕೆ ತರುವುದು.
17. Invigilator Dairy ಯನ್ನು (02 ಪ್ರತಿಗಳು) ಆನ್‌ಲೈನ್ ಮೂಲಕವೇ ಸಿದ್ದಪಡಿಸಿಕೊಳ್ಳಬೇಕು ಹಾಗೂ ಆಯಾ ದಿನದ ಉತ್ತರ ಪತ್ರಿಕೆ ಬಂಡಲ್ ಗಳ ಜೊತೆಯಲ್ಲಿಯೇ 01 ಪ್ರತಿಯನ್ನು ಕಳುಹಿಸಿಕೊಡುವುದು.
18. ಪರೀಕ್ಷೆಗೆ ಗೈರುಹಾಜರಾದ ವಿದ್ಯಾರ್ಥಿಗಳ ನೊಂದಣಿ ಸಂಖ್ಯೆ ಮತ್ತು ವಿಷಯವನ್ನು (QP Code) ಆನ್ ಲೈನ್ ಮೂಲಕವೇ ನಮೂದಿಸುವುದು.
19. **<u>S.S.P</u> ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸಬೇಕು.**
20. **ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್. ಸಿ / ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು. ಮರುಯತ್ನದ (<u>Repeaters</u>) ಮತ್ತು ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯಿತಿ ಇರುವುದಿಲ್ಲ.**
21. **<u>ಪ್ರವರ್ಗ-1ಕ್ಕೆ 2.5ಲಕ್ಷ ಹಾಗೂ ರೂ. 1ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟುಶುಲ್ಕ ಮರುಬರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ:ಸ.ಕ.ಇ./201/ಬಿ.ಎಂ.ಎಸ್.2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.</u>**
22. **<u>ಆಂತರಿಕ ಅಂಕಗಳ ಮಾರ್ಕ್ಸ್ ಲೀಸ್ಟ್‌ಗಳನ್ನು ಕಡ್ಡಾಯವಾಗಿ ಸಮರ್ಪಕವಾಗಿ ಪರಿಶೀಲಿಸಿ 10.07.2023 ಮುಂಚೆಯೇ Online ಮುಖಾಂತರ ಸಲ್ಲಿಸಬೇಕು. ಫಲಿತಾಂಶ ನೀಡಿದ ನಂತರ ಯಾವುದೇ ತಿದ್ದುಪಡಿ/ ಮಾರ್ಪಾಡುಗಳಿಗೆ ಅವಕಾಶ ಇರುವುದಿಲ್ಲ.</u>**
23. ಮುದ್ರಿತ ನಮೂನೆಗಳು(ಸೈದ್ಧಾಂತಿಕ/ಪ್ರಾಯೋಗಿಕ) ಹಾಗೂ ಲೇಖನ ಸಾಮಗ್ರಿಗಳ ಬೇಡಿಕೆ ಪಟ್ಟಿಯನ್ನು ಸಹ <u>ದಿನಾಂಕ: 31-05-2023</u> ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.
24. ವಿಶ್ವವಿದ್ಯಾನಿಲಯದ ಆಂತರಿಕ ಕಿರುಪರೀಕ್ಷೆಯ ಉತ್ತರ ಪತ್ರಿಕೆ (ಬ್ಲೂ ಬುಕ್) ಗಳನ್ನು ಹಿಂಪಡೆಯುವುದರಿಂದ ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ ಯಾವುದೇ ತೊಂದರೆಗಳು ಇದ್ದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

25. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ (**Monitoring committee**ಯಲ್ಲಿ ಪರಿಶೀಲಿಸಿ **Freeze** ಮಾಡಿದ ನಂತರ) ಯಾವುದೇ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.
26. ಪ್ರಸ್ತುತ ಸಾಲಿನಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ವಿಭಾಗದಿಂದ ಅನುಮೋದನೆಗೊಂಡ ವಿದ್ಯಾರ್ಥಿಗಳನ್ನು ಮಾತ್ರ ಪರೀಕ್ಷೆಗೆ ಹಾಜರು ಪಡಿಸುವ ಹೊಣೆಯು ಕಾಲೇಜಿನ ಪ್ರಾಂಶುಪಾಲರದ್ದಾಗಿರುತ್ತದೆ. ತಪ್ಪಿದಲ್ಲಿ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.
27. ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಪಟ್ಟಿಯನ್ನು (Absentee Statement) ಪ್ರತ್ಯೇಕವಾಗಿ ಆಯಾ ದಿನದಂದೇ ವಿಶ್ವವಿದ್ಯಾನಿಲಯಕ್ಕೆ ಕಳುಹಿಸಬೇಕು.

**ವಿಶೇಷ ಸೂಚನೆ:-**

1) 2016–17ನೇ ಪಠ್ಯಕ್ರಮದ ದ್ವಿಗುಣ ಅವಧಿ (Double the Duration)ಮುಗಿದ ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಳ್ಳಲು ಅಂತಿಮ ಅವಕಾಶವಾಗಿರುತ್ತದೆ. ನಂತರ ಯಾವುದೇ ಕಾರಣಕ್ಕೂ ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ನೀಡುವುದಿಲ್ಲ.

2) ನಿಯಮಾನುಸಾರ ಪರೀಕ್ಷಾ ಶುಲ್ಕ ವಿನಾಯ್ತಿ ಪಡೆದ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಮಂಜೂರಾದ ಹಣವನ್ನು ಕೂಡಲೇ ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡದಿರುವುದು ಕಂಡುಬಂದಿರುತ್ತದೆ. ಮಂಜೂರಾದ ಹಣವನ್ನು ವಿವಿಗೆ ಪಾವತಿಸದೇ ಕಾಲೇಜಿನಲ್ಲಿಯೇ ಉಳಿಸಿಕೊಂಡಲ್ಲಿ ಅಂತಹ ಪ್ರಕರಣಗಳನ್ನು ಗಂಭೀರವೆಂದು ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 6363341215, 6363337901 ಹಾಗೂ 6363351762 ಸಂಪರ್ಕಿಸಬಹುದು.**

ಕುಲಸಚಿವರು (ಪರೀಕ್ಷಾಂಗ)

ಕುಲಸಚಿವರು (ಪರೀಕ್ಷಾಂಗ)
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ – 577007

ಗೆ,

ದಾವಣಗೆರೆ ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಬಿ.ಎಂ/ಬಿ.ಸಿ.ಎ/ಬಿ.ಎಸ್.ಡಬ್ಲ್ಯೂ/ ಬಿ.ಬಿ.ಎ ಕಾಲೇಜುಗಳ ಪ್ರಾಚಾರ್ಯರುಗಳಿಗೆ.

ಪ್ರತಿ:

1. ಸಮಾಜ ಕಲ್ಯಾಣ ಅಧಿಕಾರಿಗಳು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
2. ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
3. ಆಪ್ತಶಾಖೆ, ಮಾನ್ಯ ಕುಲಪತಿಗಳು, ಕುಲಸಚಿವ(ಆಡಳಿತ), ಹಣಕಾಸು ಅಧಿಕಾರಿಗಳು, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಉಪಕುಲಸಚಿವರು (ಪರೀಕ್ಷಾಂಗ), ಉಪಕುಲಸಚಿವರು(ಆಡಳಿತ), ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
5. ಅಧೀಕ್ಷಕರು, ವಿಷಯ ನಿರ್ವಾಹಕರುಗಳು, ಪರೀಕ್ಷಾಂಗ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಪ್ರಾದೇಶಿಕ ಮುಖ್ಯಸ್ಥರು, ಲಾಜಿಸ್, ದಾವಣಗೆರೆ.
7. ಕಛೇರಿ ಪ್ರತಿ.